ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	426 (567)
ಸದಸ್ಯರ ಹೆಸರು	:	ಶ್ರೀಮತಿ ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	21.02.2022
ಉತ್ತರಿಸುವವರು	:	ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕೊಡಗು ಜಿಲ್ಲೆಯಾದ್ಯಂತ ಕಾಫಿ ತೋಟಗಳಲ್ಲಿ ಮಂಗಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಆ)	ಬಂದಿದ್ದಲ್ಲಿ, ಮಂಗಗಳ ನಿಯಂತ್ರಣಕ್ಕೆ ಸರ್ಕಾರ ಇದುವರೆಗೆ ಕೈಗೊಂಡ ಕ್ರಮವೇನು;	ಸರ್ಕಾರದ ಆದೇಶ ಸಂಖ್ಯೆ: ಅಪಜೀ 81 ಎಫ್ ಡಬ್ಲ್ಯೂಎಲ್ 2009, ದಿನಾಂಕ: 26/8/2010ರಲ್ಲಿ ವನ್ಯಜೀವಿ (ಸಂರಕ್ಷಣಾ) ಕಾಯ್ದೆ, 1972ರ ಸೆಕ್ಷನ್ 11 ರನ್ವಯ ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಪ್ರದತ್ತವಾದ ಅಧಿಕಾರವನ್ನು ಸ್ಥಳೀಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಪ್ರತ್ಯಾಯೋಜಿಸಲಾಗಿದ್ದು, ಅದರನ್ವಯ ಮಂಗಗಳ ಹಾವಳಿ ಪ್ರಕರಣಗಳಲ್ಲಿ ತ್ವರಿತವಾಗಿ ಅಗತ್ಯ ಕ್ರಮ ಜರುಗಿಸಲು ಹಾಗೂ ಮಂಗಗಳನ್ನು ಸೆರೆಹಿಡಿದು ಸೂಕ್ತ ಅರಣ್ಯ ಪ್ರದೇಶಕ್ಕೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ. ಮುಂದುವರೆದು, ಮಲೆನಾಡು ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಮಂಗಗಳ ಹಾವಳಿಯಿಂದ ಉಂಟಾಗುತ್ತಿರುವ ಬೆಳೆಹಾನಿ ಹಾಗೂ ಇತರೆ ತೊಂದರೆಗಳನ್ನು ನಿವಾರಿಸಲು ಅನುವಾಗುವಂತೆ ಅಧ್ಯಯನ ಮಾಡಲು "ತಜ್ಞರ ಪರಿಣಿತರ ಸಮಿತಿ" ಯನ್ನು ರಚಿಸುವ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿರುತ್ತದೆ.
ಇ)	ಬೆಳೆಹಾನಿ ಮಾಡುತ್ತಿರುವ ಮಂಗಗಳ ಉಪಟಳ ತಪ್ಪಿಸಲು ಅವುಗಳ ವಾಸಸ್ಥಾನವಾದ ಅರಣ್ಯದಲ್ಲೇ ಅವುಗಳಿಗೆ ಯಥೇಚ್ಛವಾಗಿ ಆಹಾರ ಸಿಗುವ ರೀತಿಯಲ್ಲಿ ಹಣ್ಣಿನ ಸಸಿಗಳನ್ನು ನೆಟ್ಟು ಬೆಳೆಸುವ ಯೋಜನೆಯನ್ನು ಸರ್ಕಾರ ರೂಪಿಸಲಾಗಿದೆಯೇ?	ಅರಣ್ಯ ಪ್ರದೇಶಗಳಲ್ಲಿ ಕೈಗೊಳ್ಳುವ ಅರಣ್ಯೀಕರಣ ಕಾರ್ಯಕ್ರಮಗಳಲ್ಲಿ ಸ್ಥಳೀಯ ಸಸಿಗಳನ್ನು ಕೂಡ ನೆಡಲಾಗುತ್ತಿದೆ. ಆದರೆ ಮಂಗಗಳಿಗಾಗಿಯೇ ಸಸಿಗಳನ್ನು ನೆಟ್ಟು ಬೆಳೆಸುವ ಪ್ರತ್ಯೇಕ ಯೋಜನೆ ಇರುವುದಿಲ್ಲ.

ಸಂಖ್ಯೆ: ಅಪಜೀ 26 ಎಫ್‌ಡಬ್ಲ್ಯೂಎಲ್ 2022

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು